# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ವಿಧಾನ ಪರಿಷತ್ತಿನ ಸದಸ್ಯರ ಹೆಸರು: | ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮ ನಿರ್ದೇಶನ ಹೊಂದಿದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 2334 (2719) (ತಡೆಹಿಡಿಯಲಾದ ಪ್ರಶ್ನೆ) |
| ಉತ್ತರಿಸಬೇಕಾದ ದಿನಾಂಕ: | 28-03-2022. |
| ಉತ್ತರಿಸುವ ಸಚಿವರು: | ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖಾ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ವೈದ್ಯಕೀಯ ಉನ್ನತ ವ್ಯಾಸಂಗಕ್ಕಾಗಿ ಉಕ್ರೇನ್ ದೇಶಕ್ಕೆ ತೆರಳಿದ್ದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಉಕ್ರೇನ್‌ನಿಂದ ಮರಳಿ ಬಂದಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಇನ್ನೂ ಉಕ್ರೇನ್‌ನಿಂದ ಹಿಂತಿರುಗಿ ಬರಬೇಕಾದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; | ವೈದ್ಯಕೀಯ ಉನ್ನತ ವ್ಯಾಸಂಗಕ್ಕಾಗಿ ಉಕ್ರೇನ್ ದೇಶಕ್ಕೆ ತೆರಳಿದ ಮತ್ತು ಹಿಂತಿರುಗಿ ಬರಬೇಕಾದ ವಿದ್ಯಾರ್ಥಿಗಳ ಮಾಹಿತಿ ಕೇಂದ್ರ ಸರ್ಕಾರದ ಹಂತದಲ್ಲಿರುತ್ತದೆ. ಉಕ್ರೇನ್ ನಿಂದ ಕರ್ನಾಟಕ ರಾಜ್ಯಕ್ಕೆ ಮರಳಿ ಬಂದಿರುವ ವಿದ್ಯಾರ್ಥಿಗಳ ಸಂಖ್ಯೆ ಇಲ್ಲಿಯವರೆಗೂ ಸುಮಾರು 700ಕ್ಕೂ ಹೆಚ್ಚು ಆಗಿರುತ್ತಾರೆ. |
| ಆ) | ವೈದ್ಯಕೀಯ ಶಿಕ್ಷಣವನ್ನು ಮೊಟಕುಗೊಳಿಸಿ ರಾಜ್ಯಕ್ಕೆ ಹಿಂದಿರುಗಿರುವ ವಿದ್ಯಾರ್ಥಿಗಳಿಗೆ ಅವರ ಶಿಕ್ಷಣವನ್ನು ಮುಂದುವರೆಸಲು ಸರ್ಕಾರ ಕೈಗೊಳಡಿರುವ ಕ್ರಮಗಳೇನು; | ವೈದ್ಯಕೀಯ ಶಿಕ್ಷಣವನ್ನು ಮೊಟಕುಗೊಳಿಸಿ ರಾಜ್ಯಕ್ಕೆ ಹಿಂದಿರುಗಿರುವ ವಿದ್ಯಾರ್ಥಿಗಳಿಗೆ ಅವರ ಶಿಕ್ಷಣವನ್ನು ಮುಂದುವರೆಸಲು ಸನ್ಮಾನ್ಯ ಮುಖ್ಯಮಂತ್ರಿಯವರು ಹಾಗೂ ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖಾ ಸಚಿವರೊಂದಿಗೆ ಚರ್ಚೆಯಾಗಿದ್ದು, ನಮ್ಮ ರಾಜ್ಯದ ಮೆಡಿಕಲ್ ಕಾಲೇಜುಗಳಲ್ಲಿ ಅವರ ಕಲಿಕೆಯನ್ನು ಮುಂದುವರೆಸುವ ಬಗ್ಗೆ ನಿರ್ಧಾರ ಕೈಗೊಳ್ಳಲು ಕೇಂದ್ರ ಸರ್ಕಾರದ ಮುಂದೆ ವಿಷಯವನ್ನು ಪ್ರಸ್ತುತಪಡಿಸಲಾಗಿದೆ. |
| ಇ) | ವೈದ್ಯಕೀಯ ಶಿಕ್ಷಣಕ್ಕಾಗಿ ಉಕ್ರೇನ್ ಯುದ್ಧ ಭೀತಿಯಿಂದ ಮರಳಿ ಬಂದಿರುವ ವಿದ್ಯಾರ್ಥಿಗಳು ಬಹಳ ಬಡ ಕುಟುಂಬದವರಾಗಿದ್ದು, ಇವರಿಗೆ ಉಚಿತವಾಗಿ ವೈದ್ಯಕೀಯ ಶಿಕ್ಷಣ ಮುಗಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗುತ್ತಿದೆ? | ರಾಷ್ಟ್ರೀಯ ವೈದ್ಯಕೀಯ ಪರಿಷತ್ತು ನಮ್ಮ ರಾಷ್ಟ್ರದಲ್ಲಿ ವೈದ್ಯಕೀಯ ಶಿಕ್ಷಣ ನೀತಿಯನ್ನು ನಿರೂಪಿಸುವ ಅಗ್ರ ಮಾನ್ಯ ಶಾಸನಬದ್ಧ ಸಂಸ್ಥೆಯಾಗಿರುತ್ತದೆ. ಪ್ರಸ್ತುತ ಹೊರದೇಶದಲ್ಲಿ ವೈದ್ಯಕೀಯ ಶಿಕ್ಷಣ ಪಡೆದ ವಿದ್ಯಾರ್ಥಿಗಳು ನಮ್ಮ ದೇಶದಲ್ಲಿ ವೈದ್ಯಕೀಯ ಸೇವೆಯನ್ನು ಇಚ್ಛಿಸಿದಲ್ಲಿ Foreign Medical Graduates Examination (FMGE) ಪರೀಕ್ಷೆಯಲ್ಲಿ |

| | | |
|---|---|---|
| | | ಉತ್ತೀರ್ಣರಾಗಿರಬೇಕಿರುತ್ತದೆ. ಸದ್ಯಕ್ಕೆ ಈ ಪರೀಕ್ಷೆಯಲ್ಲಿ ಯಾವುದೇ ವಿನಾಯಿತಿಯನ್ನು ನೀಡಲಾಗಿರುವುದಿಲ್ಲ. ಉಕ್ರೇನ್ ದೇಶದಲ್ಲಿ ವೈದ್ಯಕೀಯ ವಿದ್ಯಾಭ್ಯಾಸ ಮಾಡುತ್ತಿದ್ದ ವಿದ್ಯಾರ್ಥಿಗಳು ಯುದ್ಧದ ಕಾರಣದಿಂದ ರಾಜ್ಯಕ್ಕೆ ಮರಳಿದ್ದಾರೆ. ಇದೊಂದು ವಿಶೇಷ ಸಂದರ್ಭವಾಗಿದ್ದು, ಈ ಸಮಸ್ಯೆಯನ್ನು ಪರಿಹರಿಸುವ ನಿಟ್ಟಿನಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರವು ಅವಶ್ಯಕ ಕ್ರಮ ಕೈಗೊಳ್ಳುವ ಬಗ್ಗೆ ವಿದ್ಯಾರ್ಥಿಗಳೊಂದಿಗೆ ಸಂವಾದವನ್ನು ನಡೆಸಿ ಹಾಗೂ ಕ್ಷೇತ್ರ ಪರಿಣಿತರೊಂದಿಗೆ ಚರ್ಚಿಸಿ ರಾಷ್ಟ್ರೀಯ ವೈದ್ಯಕೀಯ ಪರಿಷತ್ತು ನೀಡುವ ಸೂಚನೆಗಳೊಂದಿಗೆ ಪರಿಹಾರ ನೀಡುವಲ್ಲಿ ಸೂಕ್ತ ಕ್ರಮವನ್ನು ಕೈಗೊಳ್ಳಲಾಗುವುದು. |

No: MED 43 RGU 2022

(ಡಾ.ಕೆ.ಸುಧಾಕರ್)

ವೈದ್ಯಕೀಯ ಶಿಕ್ಷಣ ಹಾಗೂ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಇಲಾಖಾ ಸಚಿವರು